# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು.

ಸಂಖ್ಯೆ: ಸ.ಅ/ವಾ-21/ಪಿ.ಆರ್/07/2020-21 ದಿನಾಂಕ:07-01-2021.

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 02-01-2021 ರಂದು 12.00 ಗಂಟೆಗೆ ವಾರ್ಡ್ ನಂ:21 ಹೆಬ್ಬಾಳ ವಾರ್ಡ್ ವ್ಯಾಪ್ತಿಯಲ್ಲಿನ ಕ್ಷೇಮಾಭಿವೃದ್ಧಿ ಸಂಘ (ರಿ) ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಎಂ.ವೆಂಕಟಾಚಲಪತಿ ಜಂಟಿ ಆಯುಕ್ತರು (ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ಮುಕೇಶ್ ಎಸ್ ಬಿರಾದಾರ್ (ಎ.ಇ) | ಸದಸ್ಯ ಕಾರ್ಯದರ್ಶಿ ವಾರ್ಡ್ ನಂ: 21 |
| 03 | ಸೋಮಶೇಖರ | ಕಿರಿಯ ಆರೋಗ್ಯ ಪರಿವೀಕ್ಷಕರುವಾಡ್ ನಂ: 21, ಸದಸ್ಯರು |
| 04 | ರಾಧ. ಈ | ಕಿರಿಯ ಅಭಿಯಂತರರು, ಬೆಸ್ಕಾಂ |
| 05 | ಲಝುರ್ ಆರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸದಸ್ಯರು |
| 06 | ನಟರಾಜು | ಕಂದಾಯ ಮೌಲ್ಯಮಾಪಕರು, ಸದಸ್ಯರು |
| 07 | ರಾಮಣ್ಣ. ಎನ್ | ತೆರಿಗೆ ನೀರಿಕ್ಷಕರು ವಾರ್ಡ್-21 |
| 08 | ಹರೀಶ್ ಕುಮಾರ್ | ಕೆಲಸ ಪರಿವೀಕ್ಷಕರು, ಸದಸ್ಯರು |
| 09 | ಎನ್. ಪ್ರಕಾಶ್ | ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಕಾರ್ಯದರ್ಶಿಗಳು |
| 10 | ಎಂ.ಆರ್ ಗೋಪಿನಾಥ್ ರಾವ್ | ಸ್ಥಳೀಯ ನಿವಾಸಿಗಳ |
| 11 | ಸುಂದರ್ ರಾಜನ್ | ಸ್ಥಳೀಯ ನಿವಾಸಿಗಳ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ.ಎಂ.ವೆಂಕಟಾಚಪತಿ ಮತ್ತು ಕಾರ್ಯದರ್ಶಿಗಳಾದ ಶ್ರೀ ಮುಕೇಶ್ ಎಸ್. ಬಿರಾದರ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ:21 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಸಾರ್ವಜನಿಕರುಗಳ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ದಿನಾಂಕ : 02-01-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

- **<u>ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:</u>**

1. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳಲ್ಲಿ ತ್ಯಾಜ್ಯ ಹಾಕುತ್ತಿರುವುದನ್ನು ತಡೆಯಲು ಸದರಿ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮರ ಅಳವಡಿಸುವ ಕುರಿತು ವಾರ್ಡ್ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ರವರಿಗೆ ಈ ಕೂಡಲೇ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು.
2. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳಲ್ಲು ಸ್ವಚ್ಚಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯಾ ಕ್ರಮ ವಹಿಸಲು ಸೂಚಿಸಲಾಯಿತು.

- **ಬೆಸ್ಕಾಂ ವಿಭಾಗ ರವರಿಗೆ:**
  1. ವಾರ್ಡ್ ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳ ಮೇಲೆ ಚಾಚಿಕೊಂಡಿರುವ ಮರದ ರೆಂಬೆಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.
- **ಬಿಡಬ್ಲ್ಯೂಎಸ್ಎಸ್ಬಿ ರವರಿಗೆ:**
  1. ವಾರ್ಡ್ ವ್ಯಾಪ್ತಿಯಲ್ಲಿ ಬಿಡಬ್ಲ್ಯೂಎಸ್ಎಸ್ಬಿ ರವರು ರಸ್ತೆ ಅಗೆತದಿಂದ ಆಗಿರುವ ರಸ್ತೆ ದುರಸ್ಥಿಯನ್ನು ಸರಿಪಡಿಸುವಂತೆ ಹಾಗೂ (Wet Mix) ಹಾಕುವಂತೆ ಸೂಚಿಸಲಾಯಿತು .
  2. ವಾರ್ಡ್ ವ್ಯಾಪ್ತಿಯಲ್ಲಿ ವೇಳ ಪಟ್ಟಿಯಂತೆ ಸರಿಯಾದ ಸಮಯಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಸೂಚಿಸಲಾಯಿತು.
- **ಕಾಮಗಾರಿ ಇಲಾಖೆಗೆ.**
  1. ಆನಂದ ನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ (ಡಬ್ರಿಸ್) ಹೂಳು ತ್ಯಾಜ್ಯವನ್ನು ತೆರವುಗೊಳಿಸುವಂತೆ ಸೂಚಿಸಲಾತು.
  2. ಆನಂದನಗರ 1ನೇ ಮುಖ್ಯ ರಸ್ತೆಯಲ್ಲಿ ಪಾದಚಾರಿಗಳ ಮಾರ್ಗವನ್ನು ದುರಸ್ಥಿ ಪಡಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 21, ಹೆಬ್ಬಾಳ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 21, ಹೆಬ್ಬಾಳ

**ಪ್ರತಿಯನ್ನು:-**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.